**Bangalore**
**Regional News**
**22.08.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರಿಗೆ ಮೈಸೂರು ಜಿಲ್ಲಾಡಳಿತದಿಂದ ಆಹ್ವಾನ
2. ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗೆ ಶಾಸಕರಿಗೆ ಹಣ ಬಿಡುಗಡೆ - ವಿಧಾನಸಭೆಯಲ್ಲಿ ಭರವಸೆ ನೀಡಿದ ಮುಖ್ಯಮಂತ್ರಿ
3. ಗಣೇಶ ಚತುರ್ಥಿಗೆ ಕಠಿಣ ನಿಯಮ ವಿರೋಧಿಸಿ ಪ್ರತಿಪಕ್ಷಗಳಿಂದ ಸಭಾ ತ್ಯಾಗ: ಉಭಯ ಸದನಗಳ ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಿಕೆ
4. ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಿದ್ದು, ಅಭಿವೃದ್ಧಿ ಕುಂಠಿತ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಗಂಭೀರ ಆರೋಪ
5. ಡಿಕೆಗೆ ಮಾರಕ ರೋಗ: ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ ಮಾಡಿದ ಸಂಸದರ ನಿಯೋಗ

<><><><>

ಈ ಬಾರಿ ವಿಶ್ವ ವಿಖ್ಯಾತ ದಸರಾ ಮಹೋತ್ಸವವನ್ನು ಬುಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಅವರು ಉದ್ಘಾಟಿಸಲಿದ್ದು, ಜಿಲ್ಲಾಡಳಿತದ ವತಿಯಿಂದ ಬಾನು ಮುಷ್ತಾಕ್ ಅವರನ್ನು ಗೌರವದಿಂದ ಆಹ್ವಾನಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾನು ಮುಷ್ತಾಕ್ ಅವರ ಕೃತಿ ಎದೆಯ ಹಣತೆಗೆ ಬುಕರ್ ಪ್ರಶಸ್ತಿ ದೊರೆತಿದ್ದು, ಕರ್ನಾಟಕದ ಲೇಖಕಿಗೆ ಈ ಪ್ರಶಸ್ತಿ ದೊರೆತಿರುವುದು ಸಂತಸ ತಂದಿದೆ. ರೈತ ಸಂಘ, ಕನ್ನಡ ಚಳವಳಿಯ ಜೊತೆಗೆ ಹೋರಾಟದ ಹಿನ್ನೆಲೆಯುಳ್ಳ ಬಾನು ಮುಷ್ತಾಕ್, ಪ್ರಗತಿಪರ ಚಿಂತಕರೂ ಆಗಿದ್ದಾರೆ ಎಂದರು.

ಈ ಬಾರಿಯ ದಸರಾ ಮಹೋತ್ಸವವನ್ನು ಕಾಂಗ್ರೆಸ್ ಪಕ್ಷದ ವರಿಷ್ಠರಾದ ಸೋನಿಯಾಂಧಿ ಉದ್ಘಾಟಿಸಲಿದ್ದಾರೆ ಎಂಬ ಕಾಲ್ಪನಿಕ ಸುದ್ದಿಯನ್ನು ಕೆಲ ಮಾಧ್ಯಮಗಳು ವರದಿ ಮಾಡಿವೆ. ಇದು ಸತ್ಯಕ್ಕೆ ದೂರವಾದದ್ದು. ಆ ರೀತಿಯ ಉದ್ದೇಶವಾಗಲೀ, ಪ್ರಸ್ತಾವನೆಯಾಗಲಿ ಸರ್ಕಾರದ ಮುಂದೆ ಇಲ್ಲ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಚುನಾವಣೆ ನಡೆಸಲು ಎಲ್ಲಾ ರೀತಿಯ ಸಿದ್ಧತೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿ ಹೇಳಿದ್ದಾರೆ. ಈ ಸಂಬಂಧ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ಬೆಂಗಳೂರು ನಗರದ ಕಸ ಸಮಸ್ಯೆ ನಿವಾರಣೆಗೆ ಎಲ್ಲಾರೀತಿ ಕ್ರಮಕೈಗೊಳ್ಳಲಾಗುತ್ತದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಭೋಜನ ವಿರಾಮದ ಪ್ರತಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ ಶಾನಕರಿಗೆ ಅನುದಾನ ಬಿಡುಗಡೆಯ ಮೊತ್ತವನ್ನು ಸದನದಲ್ಲಿ ಘೋಷಿಸಬೇಕು ಎಂದು ಒತ್ತಾಯಿಸಿದರು. ಪ್ರತಿಪಕ್ಷ ಸದಸ್ಯರು ಸಭಾಧ್ಯಕ್ಷರ ಮುಂದಿನ ಬಾವಿಗೆ ಇಳಿದು ಧರಣಿ ಆರಂಭಿಸಿದರು. ಶಾಸಕರನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಶಾಸಕರ ಕ್ಷೇತ್ರದ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಅಕ್ರಮ ಗಣಿಗಾರಿಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸದನದಲ್ಲಿ ವರದಿ ಮಂಡಿಸಿದ ನಂತರ ಸಭಾಧ್ಯಕ್ಷ ಯು.ಟಿ.ಖಾದರ್ ಸದನವನ್ನು ಅನಿರ್ದಿಷ್ಟ ಕಾಲ ಮುಂದೂಡಿದರು.

<><><><>

ಸಾರ್ವಜನಿಕವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಚತುರ್ಥಿ ಆಚರಿಸುವ ಕುರಿತು ರಾಜ್ಯ ಸರ್ಕಾರ ಕಠಿಣ ನಿಯಮಗಳನ್ನು ಜಾರಿಗೆ ತಂದು ಹಿಂದೂ ವಿರೋಧಿ ನಡೆ ಹೊಂದಿದೆ ಎಂದು ಆರೋಪಿಸಿ ಮೇಲ್ಮನೆಯಲ್ಲಿ ವಿಪಕ್ಷ ಸದಸ್ಯರು ಸದನದ ಬಾವಿಗಳಿದು ಧರಣಿ ನಡೆಸಿದರು. ಬಿಜೆಪಿ ಸದಸ್ಯ ಶಶೀಲ್ ನಮೋಶಿ ವಿಷಯ ಪ್ರಸ್ತಾಪಿಸಿ, ಕಲಬುರ್ಗಿ ಜಿಲ್ಲೆಯಲ್ಲಿ ಉದ್ದೇಶ ಪೂರ್ವಕವಾಗಿ ಸಾರ್ವಜನಿಕವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಚತುರ್ಥಿ ಆಚರಿಸುವ ಕುರಿತು ಕಠಿಣ ನಿಯಮ ತರಲಾಗಿದೆ. ಬ್ರಿಟಿಷರ ಕಾಲದಲ್ಲಿಯೇ ಈ ನಿಯಮಗಳು ಇರಲಿಲ್ಲ. ಈಗೇಕೆ ಎಂದು ಸರ್ಕಾರಕ್ಕೆ ಪ್ರಶ್ನಿಸಿದರು. ಇದಕ್ಕೆ ದನಿಗೂಡಿಸಿದ ಇತರೆ ಬಿಜೆಪಿ ಸದಸ್ಯರು, ಸರ್ಕಾರ ಹಿಂದೂ ವಿರೋಧಿ ಧೋರಣೆ ಹೊಂದಿದೆ ಎಂದು ಆರೋಪಿಸಿದರು. ಸರ್ಕಾರದ ಪರವಾಗಿ ಸಚಿವ ಎನ್.ಎಸ್.ಬೋಸರಾಜು ಉತ್ತರಿಸಿ ಸರ್ಕಾರ ನಿಯಮ ರೂಪಿಸಿಲ್ಲ. ಆಯಾ ಜಿಲ್ಲಾಡಳಿತ ಕ್ರಮ ಕೈಗೊಳ್ಳುತ್ತಿದೆ ಎಂದು ಸಮಾಜಾಯಿಷಿ ನೀಡಿದರು. ಈ ವೇಳೆ ವಿಪಕ್ಷ ಸದಸ್ಯರು ರಾಜ್ಯಕ್ಕೆ ಒಂದೇ ನಿಯಮ ರೂಪಿಸಿ ಎಂದು ಪಟ್ಟುಹಿಡಿದರು. ಸದನದ ಬಾವಿಗಳಿದು ಧರಣಿ ನಡೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಹಲವು ವಿಧೇಯಕಗಳನ್ನು ಗದ್ದಲದ ನಡುವೆ ಅಂಗೀಕರಿಸಲಾಯಿತು. ವಿಪಕ್ಷಗಳ ಧರಣಿ ಮುಂದುವರೆದ ಹಿನ್ನೆಲೆ ಪೀಠದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಪರಿಷತ್ತು ಕಲಾಪವನ್ನು ಅನಿರ್ದಿಷ್ಟವಾಧಿಗೆ ಮುಂದೂಡಲಾಗಿದೆ ಎಂದು ಪ್ರಕಟಿಸಿದರು.

<><><><>

ರಾಜ್ಯ ಸರ್ಕಾರದ ದುರಾಡಳಿತದಿಂದಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಸಾಮಾನ್ಯ ಜನರ ಜೀವನ ದುಸ್ತರವಾಗಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಭ್ರಷ್ಟಾಚಾರ ಹೆಚ್ಚಿದ್ದು, ಅಭಿವೃದ್ಧಿ ಕುಂಠಿತಗೊಂಡಿದೆ ಎಂದು ದೂರಿದ್ದಾರೆ. ಅವೈಜ್ಞಾನಿಕ ಖಾತರಿ ಯೋಜನೆಗಳಿಂದಾಗಿ ರಾಜ್ಯದ ಬೊಕ್ಕಸ ಬರಿದಾಗಿದ್ದು, ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದಲೂ ಜನರ ಮೇಲೆ ಆರ್ಥಿಕ ಹೊರೆ ಹೊರಿಸಿದೆ ಎಂದು ಹೇಳಿದ್ದಾರೆ.

<><><>

ಒಳ ಮೀಸಲಾತಿ ಹಂಚಿಕೆಯಲ್ಲಿ ಅನ್ಯಾಯವಾಗಿದೆ ಎಂದು ಆರೋಪಿಸಿ ಕರ್ನಾಟಕ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯಗಳಿಗೆ ಬಿಜೆಪಿ ಬೆಂಬಲ ನೀಡಿದೆ. ಪರಿಷತ್ ಸದಸ್ಯ ಸಿ.ಟಿ. ರವಿ, ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಸೇರಿದಂತೆ ಬಿಜೆಪಿಯ ಹಲವು ಮುಖಂಡರು ಫ್ರೀಡಂಪಾರ್ಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಸಿ.ಟಿ. ರವಿ ವಿಶಿಷ್ಟ ವರ್ಗವಾಗಿರುವ ಅಲೆಮಾರಿ ಸಮುದಾಯಗಳನ್ನು ಪ್ರಬಲ ಗುಂಪುಗಳ ಜೊತೆ ಸೇರಿಸಿರುವುದು ಸಾಮಾಜಿಕ ಅನ್ಯಾಯಕ್ಕೆ ಸಮಾನ ಎಂದು ತಿಳಿಸಿದ್ದಾರೆ.

<><><>

ಅಡಿಕೆ ಬೆಳೆಗೆ ತಗುಲುವ ಮಾರಕ ರೋಗಗಳ ತಡೆ ಮತ್ತು ಪರಿಹಾರದ ವಿಷಯವಾಗಿ ರಾಜ್ಯದ ಅಡಿಕೆ ಬೆಳೆಯುವ ಪ್ರದೇಶದ ಲೋಕಸಭಾ ಸದಸ್ಯರು ಮತ್ತು ಬೆಳೆಗಾರರ ಸಂಘಗಳ ಪ್ರತಿನಿಧಿಗಳ ನಿಯೋಗ ನವದೆಹಲಿಯಲ್ಲಿಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ. ಪ್ರತಿವರ್ಷ ಅಡಿಕೆಗೆ ತಗುಲುವ ಹಲವು ರೋಗಗಳ ನಿಯಂತ್ರಣ ಸಂಬಂಧ ಸೂಕ್ತ ಸಂಶೋಧನೆ ಮತ್ತು ಪರಿಹಾರ ಕ್ರಮಗಳ ಕುರಿತು ಸಚಿವರ ಗಮನ ಸೆಳೆಯಲಾಗಿದೆ. ಈ ನಿಯೋಗದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ, ವಿ. ಸೋಮಣ್ಣ, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ, ವಿಶ್ವೇಶ್ವರ ಹೆಗಡೆ ಕಾಗೇರಿ, ಯದುವೀರ ಒಡೆಯರ್, ಗೋವಿಂದ ಕಾರಜೋಳ, ಕೋಟ ಶ್ರೀನಿವಾಸ್ ಪೂಜಾರಿ, ಬಿ.ವೈ.ರಾಘವೇಂದ್ರ, ಬ್ರಿಜೇಶ್ ಚೌಟ,ಅಡಿಕೆ " ಮಹಾಮಂಡಳದ ಅಧ್ಯಕ್ಷ ಅರಗ ಜ್ಞಾನೇಂದ್ರ, ಕ್ಯಾಂಪ್ಕೋ ಅಧ್ಯಕ್ಷ ಕಿಶೋರ್ ಕುಮಾರ್ ಕೊಡಗಿ ಇದ್ದರು.

<><><>

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ದುರಂತಕ್ಕೆ ಸಮೂಹ ಸನ್ನಿ ಕಾರಣ ಎಂದು ಮುಖ್ಯಮಂತ್ರಿ ಸದನದಲ್ಲಿಂದು ತಿಳಿಸಿದ್ದಾರೆ. ಆದರೆ ಇದು ಸರ್ಕಾರಿ ಪ್ರಾಯೋಜಿತ ಸಾವು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ವಿಧಾನಸಭೆ ಕಲಾಪದ ವೇಳೆ ಸರ್ಕಾರದ ಉತ್ತರ ವಿರೋಧಿಸಿ ಬಿಜೆಪಿ ಸದಸ್ಯರು ಕಲಾಪ ಬಹಿಷ್ಕರಿಸಿ ಸಭಾತ್ಯಾಗ ಮಾಡಿದರು. ಬಳಿಕ ಪ್ರತಿಪಕ್ಷದ ನಾಯಕರಾದ ಆರ್. ಅಶೋಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸ್ ಅಧಿಕಾರಿಗಳು ವಿಜಯೋತ್ಸವಕ್ಕೆ ಅನುಮತಿ ನಿರಾಕರಿಸಿದ್ದರು. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ೧೧ ಜನರ ಅಮಾಯಕರ ಸಾವಿಗೆ ಸರ್ಕಾರವೇ ನೇರ ಹೊಣೆ ಎಂದು ಅವರು ಆರೋಪಿಸಿದ್ದಾರೆ.

<><><>

ಕೇಂದ್ರ ಸರ್ಕಾರವು ಆನ್ ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ೨೦೨೫ ಜಾರಿಗೆ ತಂದಿರುವುದಕ್ಕೆ ನಿಮ್ಹಾನ್ಸ್‌ನ ಪಿಎಚ್‌ಡಿ ವಿದ್ಯಾರ್ಥಿ ಹರಿ ಸಂತಸ ವ್ಯಕ್ತಪಡಿಸಿದ್ದು, ಈ ಆಪ್ ಗಳ ಚಟದಿಂದ ಬಾಳು ಹಾಳಾಗುತ್ತಿದ್ದು ಇವುಗಳ ದುಷ್ಪರಿಣಾಮ ತಡೆಯಲು ಕೇಂದ್ರ ಸರ್ಕಾರದ ಕ್ರಮ ಸ್ವಾಗತಾರ್ಹ ಎಂದು ಹೇಳಿದ್ದಾರೆ.

ಧ್ವನಿ : ಹರಿ

<><><>

ರಾಜ್ಯದಲ್ಲಿ ನಡೆದಿದ್ದ ಅಕ್ರಮ ಗಣಿಗಾರಿಕೆ ಸಂಬಂಧ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ರಚಿಸಲಾಗಿದ್ದ ಸಚಿವ ಸಂಪುಟದ ಉಪಸಮಿತಿಯ ವರದಿಯನ್ನು ರಾಜ್ಯ ಸಚಿವ ಸಂಪುಟ ಅನುಮೋದಿಸಿದೆ. ಕರ್ನಾಟಕ ರಾಜ್ಯದಲ್ಲಿ ೨೦೦೬ ರಿಂದ ೨೦೧೧ ರವರೆಗೆ ಭಾರಿ ಪ್ರಮಾಣದಲ್ಲಿ ಅಕ್ರಮ ಗಣಿಗಾರಿಕೆ ನಡೆದಿದ್ದವು. ಈ ಅಕ್ರಮದಲ್ಲಿ ಅಧಿಕಾರಸ್ಥ ರಾಜಕಾರಣಿಗಳು, ವ್ಯಾಪಾರಸ್ಥರು, ಅಧಿಕಾರಿಗಳು ಹಾಗೂ ಇನ್ನಿತರರು ಶಾಮೀಲಾಗಿ ರಾಜ್ಯದ ಸಂಪತ್ತನ್ನು ಲೂಟಿ ಮಾಡಿದ್ದರು ಎಂದು ಆರೋಪಿಸಲಾಗಿತ್ತು. ಈ ಅಕ್ರಮಗಳನ್ನು ಲೋಕಾಯುಕ್ತ ಸಂಸ್ಥೆಯು ಗಂಭೀರವಾಗಿ ಪರಿಗಣಿಸಿ ತನಿಖೆ ಮಾಡಿ ವರದಿ ನೀಡಿತ್ತು. ೨೦೧೩ ರಿಂದ ೨೦೧೮ರ ನಮ್ಮ ಸರ್ಕಾರದ ಅವಧಿಯಲ್ಲಿ ಸಚಿವ ಸಂಪುಟದ ಉಪ ಸಮಿತಿ ರಚಿಸಲಾಗಿತ್ತು. ಉಪ ಸಮಿತಿಯು ಗಣಿ ಅಕ್ರಮಗಳಿಂದ ರಾಜ್ಯದ ಬೊಕ್ಕಸಕ್ಕೆ ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ ಎಂದು ಶಿಫಾರಸ್ಸು ಮಾಡಿತ್ತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>